# ಮುಖ್ಯ ಚುನಾವಣಾಧಿಕಾರಿಯವರ ಕಛೇರಿ, ಕರ್ನಾಟಕ

ನಿರ್ವಾಚನ ನಿಲಯ, ಶೇಷಾದ್ರಿ ರಸ್ತೆ, ಬೆಂಗಳೂರು-560 001.

ಸಂಖ್ಯೆ: ಸಿಆಸುಇ 44 ಮಾನಿಸ (ಅಮುಚುಅ-1) 2018

ದಿನಾಂಕ: 09.10.2018

<u>ಇವರಿಗೆ:</u>

**ಆಯುಕ್ತರು,**
**ಸಾರ್ವಜನಿಕ ಶಿಕ್ಷಣ ಇಲಾಖೆ,**
**ಕೆ.ಆರ್.ವೃತ್ತ, ಬೆಂಗಳೂರು.**

**ಮಾನ್ಯರೇ,**

**ವಿಷಯ:** ರಾಜ್ಯದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲಾ ಶಿಕ್ಷಕರ ವರ್ಗಾವಣೆಗಳನ್ನು ಹಾಗೂ ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿ ಪ್ರಕ್ರಿಯೆಗಳನ್ನು ಹಮ್ಮಿಕೊಳ್ಳಲು ಅನುಮತಿ ಕೋರಿದ ಬಗ್ಗೆ.

**ಉಲ್ಲೇಖ:** 1. ತಮ್ಮ ಪತ್ರ ಸಂಖ್ಯೆ: ಸಿ3(7) ವರ್ಗಾವಣೆ ವೇಳಾಪಟ್ಟಿ ಹ ಅನುಮತಿ/2018-19 ದಿನಾಂಕ: 09.10.2018.

2. ಭಾರತ ಚುನಾವಣಾ ಆಯೋಗದ ಮಾರ್ಗಸೂಚಿ ಸಂ: 437/6/INST/2012/CC &BE ದಿನಾಂಕ: 26-04-2012 & 21.10.2013.

*****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ (1)ರ ಪತ್ರದಲ್ಲಿ ಮಾದರಿ ನೀತಿ ಸಂಹಿತೆಯ ಹಿನ್ನೆಲೆಯಲ್ಲಿ ಈ ಕೆಳಕಂಡ ಅಂಶಗಳಿಗೆ ಸ್ಪಷ್ಟೀಕರಣ ಕೋರಿರುತ್ತೀರಿ:

1. **ರಾಜ್ಯದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಕರ ವರ್ಗಾವಣೆ:**
   ಕರ್ನಾಟಕ ನಾಗರೀಕ ಸೇವೆಗಳು (ಶಿಕ್ಷಕರ ವರ್ಗಾವಣಾ ನಿಯಂತ್ರಣ) ಕಾಯ್ದೆ ಮತ್ತು ನಿಯಮಗಳಗನುಸಾರ ಕೇಂದ್ರೀಕೃತ ನಿಯಂತ್ರಿತ ವ್ಯವಸ್ಥೆಯಲ್ಲಿ ಎಲೆಕ್ಟ್ರಾನಿಕ್ ಮಾದರಿಯಲ್ಲಿನ ದತ್ತಾಂಶವನ್ನು ಬಳಸಿಕೊಂಡು ಆನ್‌ಲೈನ್ ಮುಖಾಂತರ ಜಿಲ್ಲಾ ಮಟ್ಟದಲ್ಲಿ ಸಂಪೂರ್ಣವಾಗಿ ಅಧಿಕಾರಿಗಳು ಹಮ್ಮಿಕೊಳ್ಳುವ ಪ್ರಕ್ರಿಯೆಯಾಗಿದ್ದು, ಸದರಿ ವರ್ಗಾವಣೆಗಳು ವಿವೇಚನೆ ವರ್ಗಾವಣೆಗಳಾಗಿರುವುದಿಲ್ಲ ಎಂಬುವುದನ್ನು ಪರಿಗಣಿಸಿ ಪ್ರಕ್ರಿಯೆಗಳನ್ನು ಹಮ್ಮಿಕೊಳ್ಳಲು ಅನುಮತಿ.

2. **ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿ ಪಟ್ಟಿಯನ್ನು ಪ್ರಕಟಿಸಲು:**
   ಡಿಸೆಂಬರ್ 2017ರಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಪೂರೈಸಲಾಗಿದ್ದು, ರಾಜ್ಯದ ಸರ್ಕಾರಿ ಶಾಲೆಗಳಲ್ಲಿನ ಖಾಲಿ ಹುದ್ದೆಗಳನ್ನು ವಿಳಂಬ ವಿಲ್ಲದಂತೆ ಭರ್ತಿಮಾಡಲು ಕ್ರಮಕೈಗೊಳ್ಳಲು 1:1 ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸಲು ಅನುಮತಿ.

ಈ ಸಂಬಂಧ ರಾಜ್ಯದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಕರ ವರ್ಗಾವಣೆಗಳ ಕುರಿತಂತೆ, ವರ್ಗಾವಣೆಗಳನ್ನು ಕೇಂದ್ರೀಕೃತ ನಿಯಂತ್ರಿತ ವ್ಯವಸ್ಥೆಯಲ್ಲಿ ಎಲೆಕ್ಟ್ರಾನಿಕ್ ಮಾದರಿಯಲ್ಲಿನ ದತ್ತಾಂಶವನ್ನು ಬಳಸಿಕೊಂಡು ಆನ್‌ಲೈನ್ ಮುಖಾಂತರ ಜಿಲ್ಲಾ ಮಟ್ಟದಲ್ಲಿ ಸಂಪೂರ್ಣವಾಗಿ ಅಧಿಕಾರಿಗಳ ಹಂತದಲ್ಲಿಯೇ ಪ್ರಕ್ರಿಯೆಯನ್ನು ಹಮ್ಮಿಕೊಳ್ಳುವುದಾಗಿ ತಿಳಿಸಿರುವುದರಿಂದ ಮತ್ತು ಚುನಾವಣಾ ಆಯೋಗದ ಉಲ್ಲೇಖ (2)ರ ಮಾರ್ಗಸೂಚಿಗಳನ್ವಯ ಉಪ ಚುನಾವಣೆಗಳು ನಡೆಯುತ್ತಿರುವ 08 ಜಿಲ್ಲೆಗಳಾದ ಬಳ್ಳಾರಿ, ಮಂಡ್ಯ, ಶಿವಮೊಗ್ಗ, ಬಾಗಲಕೋಟೆ, ರಾಮನಗರ, ಮೈಸೂರು, ಉಡುಪಿ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಚುನಾವಣಾ ಪ್ರಕ್ರಿಯೆ ಮುಗಿಯುವವರೆಗೂ ವರ್ಗಾಯಿತ ಶಿಕ್ಷಕರ ಬಿಡುಗಡೆ ಮತ್ತು ಹಾಜರಾತಿ ಕ್ರಮಗಳನ್ನು ಕೈಗೊಳ್ಳತಕ್ಕದ್ದಲ್ಲ, ಎಂಬುದನ್ನು ತಿಳಿಸಿ ಅನುಮತಿ ನೀಡಿದೆ.

ಮುಂದುವರೆದು, ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿ ಪಟ್ಟಿಯನ್ನು ಪ್ರಕಟಿಸಲು ಸಂಬಂಧಿಸಿದಂತೆ, ಸದರಿ ಪ್ರಕ್ರಿಯೆಗಳು ಕೇಂದ್ರೀಕೃತ ನಿಯಂತ್ರಿತ ವ್ಯವಸ್ಥೆಯಲ್ಲಿ ಎಲೆಕ್ಟ್ರಾನಿಕ್ ಮಾದರಿಯಲ್ಲಿನ ದತ್ತಾಂಶವನ್ನು ಬಳಸಿಕೊಂಡು ಆನ್‌ಲೈನ್ ಮುಖಾಂತರ ಹಮ್ಮಿಕೊಳ್ಳುವುದಾಗಿ ತಿಳಿಸಿರುವುದರಿಂದ ಅದರನ್ವಯ ನೇಮಕಾತಿ ಪ್ರಕ್ರಿಯೆಗಳನ್ನು ಪಾರದರ್ಶಕವಾಗಿ ಪೂರ್ಣಗೊಳಿಸಿ, ಆಯ್ಕೆಗೊಂಡ ಎಲ್ಲಾ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶಗಳನ್ನು ಚುನಾವಣಾ ಪ್ರಕ್ರಿಯೆಗಳ ಪೂರ್ಣಗೊಂಡ ನಂತರ ನೀಡಲು ಅನುಮತಿ ನೀಡಿದೆ.

ಮೇಲ್ಕಂಡ ಎಲ್ಲಾ ಪ್ರಕ್ರಿಯೆಗಳಲ್ಲಿ ಮಾದರಿ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಅಧಿಕಾರಿಗಳ ಹಂತದಲ್ಲಿ ಕ್ರಮ ಕೈಗೊಳ್ಳ ಬಹುದಾಗಿರುತ್ತದೆ.

ತಮ್ಮ ವಿಶ್ವಾಸಿ,

**(ಡಾ: ಕೆ. ಜಿ. ಜಗದೀಶ)**
ಅಪರ ಮುಖ್ಯ ಚುನಾವಣಾಧಿಕಾರಿ-1,
ಸಿ.ಆ.ಸು.ಇ. (ಚುನಾವಣೆಗಳು).